**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಇತರೆ ಪರೀಕ್ಷೆಗಳು, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು 560003**

ಸಂಖ್ಯೆ: ಕ್ಯೂ5ಶಾಖೆ/ಕೆ.ಓ.ಎಸ್/ವ.ಪ್ರ.ಪ.ಆನ್ ಲೈನ್/01 /2019-20 ದಿನಾಂಕ: 10.02.2020

**:: ಸುತ್ತೋಲೆ ::**

ವಿಷಯ: ವಲಸೆ ಪ್ರಮಾಣ ಪತ್ರವನ್ನು ಆನ್ ಲೈನ್ ನಲ್ಲಿ ಪಡೆಯಲು ಅವಕಾಶ ಕಲ್ಪಿಸಿರುವ ಬಗ್ಗೆ.

*****

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಲ್ಲಿ ಪರೀಕ್ಷಾ ಏಕೀಕರಣ ನಿರ್ವಹಣಾ ವ್ಯವಸ್ಥೆ ಪ್ರಗತಿ 10 ಯೋಜನೆಯಡಿಯಲ್ಲಿ ಬಹುತೇಕ ಪರೀಕ್ಷಾ ಚಟುವಟಿಕೆಗಳನ್ನು ತಾಂತ್ರಿಕವಾಗಿ ತಂತ್ರಾಂಶಗಳನ್ನು ಅಭಿವೃದ್ಧಿ ಪಡಿಸುವ ಮೂಲಕ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಮುಂದುವರೆದು ಕೆ.ಓ.ಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ವಲಸೆ ಪ್ರಮಾಣಪತ್ರವನ್ನು ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿ ಆನ್‌ಲೈನ್ ನಲ್ಲಿಯೇ ವಲಸೆ ಪ್ರಮಾಣ ಪತ್ರವನ್ನು ಡೌನ್ ಲೋಡ್ ಮಾಡಿಕೊಳ್ಳುವ ವ್ಯವಸ್ಥೆಯನ್ನು ಮತ್ತು ಸದರಿ ಪ್ರಮಾಣ ಪತ್ರದ ನೈಜತೆಯನ್ನು ಸಹ ಆನ್‌ಲೈನ್ ಮೂಲಕವೇ ಪರಿಶೀಲಿಸಿಕೊಳ್ಳುವ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು ವಿವರ ಕೆಳಕಂಡಂತಿರುತ್ತದೆ.

**:: ವಲಸೆ ಪ್ರಮಾಣ ಪತ್ರವನ್ನು ಪಡೆಯಲು ಪ್ರಸ್ತುತ ಚಾಲ್ತಿಯಲ್ಲಿರುವ ವಿಧಾನ ::**

ವಲಸೆ ಪ್ರಮಾಣ ಪತ್ರವನ್ನು ಪಡೆಯಲಿಚ್ಛಿಸುವ ಅಭ್ಯರ್ಥಿಗಳು, ಮಂಡಳಿಯು ನಿಗದಿಪಡಿಸಿರುವ ಅರ್ಜಿ ನಮೂನೆಯಲ್ಲಿ ಅಗತ್ಯ ಮಾಹಿತಿಯನ್ನು ನಮೂದಿಸಿ ಅಭ್ಯರ್ಥಿಯು ಸಹಿ ಮಾಡಿ ಸಂಬಂಧಿಸಿದ ಕಲಿಕಾ ಕೇಂದ್ರದ ಮುಖಾಂತರ ನಿಗದಿತ ಶುಲ್ಕದೊಂದಿದೆ ಮಂಡಳಿಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕಾಗಿತ್ತು. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಅರ್ಹ ಅಭ್ಯರ್ಥಿಗಳಿಗೆ ವಲಸೆ ಪ್ರಮಾಣ ಪತ್ರವನ್ನು ಕೈಬರಹದಲ್ಲಿ ಸಿದ್ಧಪಡಿಸಿ ಅಂಚೆ ಮೂಲಕ ಸಂಬಂಧಪಟ್ಟ ಕಲಿಕಾ ಕೇಂದ್ರಕ್ಕೆ ರವಾನಿಸಲಾಗುತ್ತಿತ್ತು. ಇದರಿಂದ ಅಭ್ಯರ್ಥಿಗಳು ಸದರಿ ಪ್ರಮಾಣ ಪತ್ರವನ್ನು ಪಡೆಯಲು ಹೆಚ್ಚಿನ ಕಾಲಾವಕಾಶದ ಜೊತೆಗೆ ಈ ರೀತಿಯ ಪತ್ರವ್ಯವಹಾರವನ್ನು ತಡೆಗಟ್ಟಿ ವಿದ್ಯಾರ್ಥಿಗಳು ಇದ್ದಲ್ಲಿಯೇ ಸದರಿ ಸೇವೆಯನ್ನು ಆನ್ ಲೈನ್ ಮೂಲಕ ನೀಡುವುದು ಸೂಕ್ತವೆಂದು ಮನಗಂಡು 2003 ಮತ್ತು 2003ರ ನಂತರ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ಈ ಸೌಲಭ್ಯವನ್ನು ಕಲ್ಪಿಸಲಾಗಿದೆ. ಇದಕ್ಕಿಂತ ಹಿಂದಿನ ವರ್ಷಗಳಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಈ ಹಿಂದಿನ ವಿಧಾನದಂತೆಯೇ ಸದರಿ ಪ್ರಮಾಣ ಪತ್ರವನ್ನು ಪಡೆಯಲು ಕ್ರಮವಹಿಸಬೇಕಾಗುತ್ತದೆ.

**:: ಕೆ.ಓ.ಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ವಲಸೆ ಪ್ರಮಾಣ ಪತ್ರವನ್ನು ಪಡೆಯಲು ಅನುಸರಿಸಬೇಕಾದ ವಿಧಾನ::**

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಜಾಲತಾಣ http://www.kseeb.kar.nic.in ರ ಮೂಲಕ ನೇರವಾಗಿ ಸದರಿ ಪ್ರಮಾಣ ಪತ್ರ ಬಯಸುವ ವಿದ್ಯಾರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ನಿಗದಿತ ಶುಲ್ಕವನ್ನು ಆನ್ ಲೈನ್ ಮುಖಾಂತರ ಎಲ್ಲಾ ಬ್ಯಾಂಕಿನ ಕ್ರೆಡಿಟ್ ಹಾಗೂ ಡೆಬಿಟ್ ಕಾರ್ಡ್ , PAYTM ಮತ್ತು UPI PAYMENTS ಮೂಲಕ ಅಥವಾ ಈ ಸೌಲಭ್ಯ ಇಲ್ಲದವರು ಆನ್‌ಲೈನ್‌ನಲ್ಲಿ ಜನರೇಟ್ ಆದ ಚಲನನ್ನು ಸದರಿ ಜಾಲತಾಣದಲ್ಲಿ ಡೌನ್ ಲೋಡ್ ಮಾಡಿಕೊಂಡು ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸಬೇಕಾಗಿರುತ್ತದೆ. ಈ ಪ್ರಕ್ರಿಯೆ ಪೂರ್ಣಗೊಂಡ ನಂತರ ವಲಸೆ ಪ್ರಮಾಣ ಪತ್ರವನ್ನು ಡೌನ್ ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ. ಹಾಗೂ ಸಂಬಂಧಪಟ್ಟವರು ಈ ಪ್ರಮಾಣ ಪತ್ರದ ನೈಜತೆಯನ್ನು ಇದೇ ಜಾಲತಾಣದಲ್ಲಿ ಪರಿಶೀಲಿಸಿಕೊಳ್ಳುವ ಅವಕಾಶವನ್ನು ಸಹ ಕಲ್ಪಿಸಲಾಗಿರುತ್ತದೆ.

ಮೇಲ್ಕಂಡ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳಲು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಲಿಕಾ ಕೇಂದ್ರಗಳ ಸಮನ್ವಯಾಧಿಕಾರಿಗಳು, ವಿದ್ಯಾರ್ಥಿಗಳು / ಪೋಷಕರುಗಳಿಗೆ ವ್ಯಾಪಕ ಪ್ರಚಾರ ನೀಡಲು ತಿಳಿಸಿದೆ.

(ವಿ. ಸುಮಂಗಲ) 10/2/2020

ನಿರ್ದೇಶಕರು, ಇತರೆ ಪರೀಕ್ಷೆಗಳು

ಪ್ರತಿಯನ್ನು:

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2) ನಿರ್ದೇಶಕರು, ಜೆ.ಎಸ್.ಎಸ್, ಕರ್ನಾಟಕ ಮುಕ್ತ ವಿದ್ಯಾಲಯ, ಮೈಸೂರು 570029 ಇವರಿಗೆ ಮುಂದಿನ ಕ್ರಮಕ್ಕಾಗಿ.
3) ಸಂಬಂಧಿಸಿದ ರಾಜ್ಯದ ಎಲ್ಲಾ ಜಿಲ್ಲೆಗಳ ಸಮನ್ವಯಾಧಿಕಾರಿಗಳು, ಕೆ.ಓ.ಎಸ್ ಕಲಿಕಾ ಕೇಂದ್ರಗಳಿಗೆ ಮಾಹಿತಿಗಾಗಿ.